ಬಂಟ್ವಾಳ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ

ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ

ಸಿಸಿ ನಂ. 92/2022

ಪ್ರಾಸಾ : 05

ಚಾಸಾ : 10

| | | |
|---|---|---|
| ಹೆಸರು | : | ಅಕ್ಬರ್ ಅಲಿ |
| ತಂದೆಯ ಹೆಸರು | : | ಬಿ ಎಸ್ ಇಸ್ಮಾಯಿಲ್ |
| ಪ್ರಾಯ | : | 43 ವರ್ಷ |
| ಉದ್ಯೋಗ | : | ಚಾಲಕ |
| ವಾಸಸ್ಥಳ | : | ಬಂಟ್ವಾಳ |

ದಿಃ **12.06.2025** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು.

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

1. ಆರೋಪಿಯನ್ನುನಾನು ನೋಡಿಲ್ಲ ಹಾಗೂ ನನಗೆ ಆರೋಪಿಯ ಪರಿಚಯ ಇಲ್ಲ. ಈ ಹಂತದಲ್ಲಿ ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆ ಕಲಂ 133 ಮೋಟಾರು ವಾಹನ ಕಾಯ್ದೆ ಪ್ರಕಾರ ನೀಡಿದ ನೋಟಿಸು ಆಗಿದ್ದು ಅದನ್ನು ನಿಪಿ- 14 ಎಂದು, ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು ಗುರುತಿಸಲಾಯಿತು. ನಿಪಿ-14 ಕ್ಕೆ ನಾನು ಪೋಲಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನನ್ನ ವಾಹನ ಟಿಪ್ಪರ್ ಲಾರಿ ಸಂಖ್ಯೆಕೆಎ-19-ಎಬಿ-6250 ವಾಹನಕ್ಕೆ ಸಂಬಂದಿಸಿದಂತೆ ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆ. ನಿಪಿ-14 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಈ ಹಂತದಲ್ಲಿ ಸಾಕ್ಷಿಗೆ

ಮತ್ತೊಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯನ್ನು ನಿಪಿ-15 ಎಂದು, ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು. ನಿಪಿ-15 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನಾನು ಠಾಣೆಗೆ ಹೋಗಿದ್ದಾಗ ಪೋಲಿಸರು ನನಗೆ ಸಹಿ ಮಾಡಲು ತಿಳಿಸಿದ್ದು ಅದರಂತೆ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿಗೆ ಮತ್ತೊಂದು ದಾಖಲೆಯನ್ನುತೋರಿಸಿಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ನಷ್ಟ ಭರ್ತಿ ಮುಚ್ಚಳಿಗೆ ಪತ್ರ ಆಗಿದ್ದು ಅದನ್ನು ನಿಪಿ-16 ಎಂದು ಸಾಕ್ಷಿಯ ಸಹಿಯನ್ನು ನಿಪಿ-16 (ಎ) ಎಂದು ಗುರುತಿಸಲಾಯಿತು. ನಿಪಿ-16 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನಾನು ಠಾಣೆಗೆ ಹೋಗಿದ್ದಾಗ ಪೋಲಿಸರು ನನಗೆ ಸಹಿ ಮಾಡಲು ತಿಳಿಸಿದ್ದು ಅದರಂತೆ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿಗೆ ನಿಪಿ-4 ರಿಂದ 7 ಪೋಟೋಗಳನ್ನು ತೋರಿಸಿ, ಸದರಿ ಪೋಟೋಗಳಲ್ಲಿರುವ ಟಿಪ್ಪರ್ ಲಾರಿ ನನಗೆ ಸೇರಿದ್ದು ಎಂದರೆ ಸಾಕ್ಷಿಯು ಅದನ್ನು ಒಪ್ಪಿರುತ್ತಾರೆ.

(ಈ ಹಂತದಲ್ಲಿ ಮಾನ್ಯ ಎ ಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಎಪಿಪಿಯವರಿಂದಃ -

2. ದಿ. 02.09.2021 ರಂದು ಮದ್ಯಾಹ್ನ 2.15 ಗಂಟೆ ಸಮಯದಲ್ಲಿ ಬಂಟ್ವಾಳ ತಾಲೂಕು ಬಿ.ಮೂಡ ಗ್ರಾಮದ ತಲಪಾಡಿ ಮಸೀದಿ ಬಳಿ ಮಂಗಳೂರು -ಬೆಂಗಳೂರು ಹೆದ್ದಾರಿಯಲ್ಲಿ ಆರೋಪಿ ತನ್ನ ಟಿಪ್ಪರ್ ಲಾರಿ ಸಂಖ್ಯೆ ಕೆಎ-19-ಎಬಿ-6250 ವಾಹನವನ್ನು ಬಿ .ಸಿ ರೋಡ್ ಕಡೆಯಿಂದ

ಅತಿವೇಗ ಮತ್ತು ನಿರ್ಲಕ್ಷತನದಿಂದ ಹೆದ್ದಾರಿಯ ಬಲ ಬದಿಯಲ್ಲಿ ಚಲಾಯಿಸಿಕೊಂಡು ಬಂದು ಮಂಗಳೂರು ಕಡೆಯಿಂದ ಬಿ.ಸಿ ರೋಡ್ ಕಡೆಗೆ ಬರುತ್ತಿದ್ದ ಚಾಸಾ-2 ರವರ ದ್ವಿ ಚಕ್ರ ವಾಹನ ಸಂಖ್ಯೆ ಕೆಎ-19-ಇಹೆಚ್ -7009 ವಾಹನಕ್ಕೆ ಅಪಘಾತಪಡಿಸಿದ ಸಂಬಂದ ದಿ. 06.09.2021 ರಂದು ಪೋಲಿಸರು ನನಗೆ ಮೋಟಾರು ವಾಹನ ಕಾಯಿ್ದೆ ಕಲಂ 133 ರಂತೆ ನಿಪಿ-14 ಪ್ರಕಾರ ನೋಟಿಸು ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಅದರಂತೆ ನಾನು ಸದರಿ ನೋಟಿಸಿಗೆ ನಿಪಿ-15 ರಂತೆ ಪ್ರತ್ಯುತ್ತರ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಪ್ರತ್ಯುತ್ತರದಲ್ಲಿ ಅಪಘಾತಕ್ಕೊಳಪಡಿಸಿದ ಲಾರಿಯನ್ನು ಆರೋಪಿ ಚಾಲನೆ ಮಾಡುತ್ತಿದ್ದುದಾಗಿ ತಿಳಿಸಿರುತ್ತೇನೆಂದರೆ ಸರಿಯಲ್ಲ. ನಂತರ ನಾನು ನಿಪಿ-16 ರಂತೆ ನಷ್ಟ ಭರ್ತಿ ಮುಚ್ಚಳಿಗೆ ಪತ್ರ ಬರೆದುಕೊಟ್ಟು ವಾಹನವನ್ನು ಬಿಡುಗಡೆಗೊಳಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರಃ ವಕೀಲರು ಪಾಟಿ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಲಾಗಿ ಕೇಳಿ ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,
ಬಂಟ್ವಾಳ